**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-560001.**

ಸಂಖ್ಯೆ: ಸಿ7(8)ಪ್ರಾಶಿಅ/ಆರ್.ಟಿ.ಇ/ದಾಖಲಾತಿ/473/2015-16 ದಿನಾಂಕ:04-04-2016

ಗೆ,

ನಿರ್ದೇಶಕರು,
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ,
ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ,
ಬೆಂಗಳೂರು-560001.

ಮಾನ್ಯರೆ,

ವಿಷಯ: 2016-17ನೇ ಸಾಲಿನಲ್ಲಿ ಆರ್.ಟಿ.ಇ ಕೋಟಾದಡಿ ಲಾಟರಿ ಪ್ರಕ್ರಿಯೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿ ಪ್ರಕಟಣೆ ಬಗ್ಗೆ.

* * * * * *

2016-17 ನೇ ಸಾಲಿನಲ್ಲಿ ಆರ್.ಟಿ.ಇ ಕೋಟಾದಡಿ ಆನ್‌ಲೈನ್ ಮೂಲಕ ಲಾಟರಿ ಪ್ರಕ್ರಿಯೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿ ಪ್ರಕಟಣೆ ಸಂಬಂಧ ಮಾಹಿತಿ ಕೋರಿ ದೂರವಾಣಿ ಕರೆಗಳ ಬರುತ್ತಿರುವುದರಿಂದ ದಿನಾಂಕ: 05.04.2016 ರ ಅರ್ಹ ಅಭ್ಯರ್ಥಿಗಳ ಪಟ್ಟಿ ಪ್ರಕಟಣೆಯ ದಿನಾಂಕ ಮುಂದೂಡಿರುವ ಬಗ್ಗೆ ಪ್ರಕಟಣೆಯ ತುಣುಕನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸುತ್ತಾ, ಸದರಿ ಪತ್ರಿಕಾ ಪ್ರಕಟಣೆಯನ್ನು ರಾಜ್ಯದಲ್ಲಿ ಅತ್ಯಧಿಕವಾಗಿ ಪ್ರಕಟವಾಗುವ ಎಲ್ಲಾ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಿಸುವಂತೆ ಕೋರಲಾಗಿದೆ.

ತಮ್ಮ ನಂಬುಗೆಯ,

(ವಿ ಪೊನ್ನುರಾಜ್)
ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ

ದಿನಾಂಕ:04.04.2016

# ಪತ್ರಿಕಾ ಪ್ರಕಟಣೆ

2016–17 ನೇ ಸಾಲಿನಲ್ಲಿ ಆರ್.ಟಿ.ಇ ಕೋಟಾದಡಿ ಆನ್‌ಲೈನ್ ಮೂಲಕ 2,74,628 ಅರ್ಜಿಗಳನ್ನು ಸ್ವೀಕರಿಸಲಾಗಿದೆ. ಒಂದು ವ್ಯಕ್ತಿ ಒಂದೇ ಅರ್ಜಿಯಲ್ಲಿ ಅವರ ನೆರೆಹೊರೆಯಲ್ಲಿ ಇರುವ ಗರಿಷ್ಠ ಐದು ಶಾಲೆಗಳಿಗೆ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ. ಹಲವಾರು ಪೋಷಕರು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿರುತ್ತಾರೆ. ಸ್ವೀಕರಿಸಿದ ಅರ್ಜಿಗಳ ನೈಜತೆಯನ್ನು ಖಾತರಿಪಡಿಸಿಕೊಳ್ಳುವ ಪ್ರಕ್ರಿಯೆ ನಡೆಯುತ್ತಿದೆ. ತಂತ್ರಾಂಶದ ಮೂಲಕ ಪರಿಶೀಲಿಸಿ ಅಪೂರ್ಣ ಅಥವಾ ಕ್ರಮಬದ್ಧವಲ್ಲದ ಅರ್ಜಿಗಳ ಬಗ್ಗೆ ಸಂಬಂಧಿಸಿದ ಪೋಷಕರ ಮೊಬೈಲ್ ಸಂಖ್ಯೆಗೆ ದಿನಾಂಕ: 05.04.2016 ರಂದು ಎಸ್.ಎಂ.ಎಸ್ ಕಳುಹಿಸಲಾಗುವುದು. ನಿಖರ ಮಾಹಿತಿಯನ್ನು ಸಂಬಂಧಿಸಿದ ಪೋಷಕರು ದಿನಾಂಕ: 09.04.2016 ರೊಳಗೆ ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡಲು ತಿಳಿಸಲಾಗಿದೆ. ಈ ಹಿನ್ನೆಲೆಯಲ್ಲಿ ದಿನಾಂಕ: 05.04.2016 ರಂದು ಪ್ರಕಟಿಸಬೇಕಾಗಿದ್ದ ಲಾಟರಿ ಪ್ರಕ್ರಿಯೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿ ಪ್ರಕಟಣೆಯನ್ನು ತಾತ್ಕಾಲಿಕವಾಗಿ ಮುಂದೂಡಲಾಗಿದೆ.

(ವಿ. ಪೊನ್ನುರಾಜ್)
ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ